AUGUST O3, 2025

# AKASHAVANI - DHARWAD

# PRADESH SAMACHARA (KANNADA) 12 PM

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

**ಧಾರವಾಡ ಜಿಲ್ಲೆಯ,** 99 ಸಾವಿರದ 983 ಅರ್ಹ ಫಲಾನುಭವಿ ರೈತರಿಗೆ, 20 ಕೋಟಿ 15 ಲಕ್ಷ ರೂಪಾಯಿ, ನೇರವಾಗಿ ಬ್ಯಾಂಕ್ ಖಾತೆಗೆ ಜಮೆಯಾಗಿದೆ ಎಂದು, ಕೇಂದ್ರ ನವ ಹಾಗೂ ನವೀಕರಿಸಬಹುದಾದ, ಇಂಧನಗಳ ಖಾತೆ ಸಚಿವ ಪ್ರಲ್ಹಾದ ಜೋಶಿ ತಿಳಿಸಿದ್ದಾರೆ. ಧಾರವಾಡ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ, ರೈತರ ಜ್ಞಾನಾಭಿವೃದ್ಧಿ ಕೇಂದ್ರದಲ್ಲಿ, ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಬಿಡುಗಡೆ ಕಾರ್ಯಕ್ರಮದಲ್ಲಿ, ಅವರು ಭಾಗವಹಿಸಿ, ರೈತರೊಂದಿಗೆ ಸಂವಾದ ನಡೆಸಿದರು. ವಿಶ್ವದ ಅತೀ ದೊಡ್ಡ, ನೇರ ಲಾಭ ವರ್ಗಾವಣೆ ಯೋಜನೆ, ಪಿ.ಎಂ. ಕಿಸಾನ್ ಸಮ್ಮಾನ್ ನಿಧಿ ಯೋಜನೆ, ದೇಶದ ಅನ್ನದಾತನಿಗೆ ವರದಾನವಾಗಿದೆ ಎಂದರು.

<><><>

**ಕೊಡಗಿನ ವಿಶಿ ಷ್ಟ ಆಥಿತ್ಯ** ಸಂಸ್ಕೃತಿ ತಿಳಿಯಲು, ಅವಕಾಶ ಒದಗಿಸುವ, 'ಹೋಂ ಸ್ಟೇ'ಗಳು, ಸ್ಥಳೀಯ ಆರ್ಥಿಕತೆ ಉತ್ತೇಜಿಸುತ್ತಿವೆ ಎಂದು, ಕೊಡಗು–ಮೈಸೂರು ಲೋಕಸಭಾ ಕ್ಷೇತ್ರದ ಸಂಸದ, ಯದುವೀರ ಒಡೆಯರ, ಹೇಳಿದ್ದಾರೆ. ಮಡಿಕೇರಿಯಲ್ಲಿ, 'ಕೊಡಗು ವಿಜನ್' ಸಂವಾದ ಕಾರ್ಯಕ್ರಮದಲ್ಲಿ ಪಾಲ್ಗೊಂಡು, ಅವರು ಮಾತನಾಡಿದರು. ಕೊಡಗು ಜಿಲ್ಲೆಯಲ್ಲಿ ಮಾತ್ರ ಕಂಡು ಬರುವ, 'ಐನ್ ಮನೆ ಸಂಸ್ಕೃತಿ'ಯನ್ನು, ಜತನದಿಂದ ಕಾಯ್ದುಕೊಳ್ಳುವ ಪ್ರಯತ್ನ ಮತ್ತು ಕಾಳಜಿ, ಕೊಡಗನ್ನು ಮೂಲ ಸ್ವರೂಪದಲ್ಲಿಯೇ ಉಳಿಸಿಕೊಳ್ಳಲಿದೆ ಎಂದರು. ಕೊಡಗಿನ ಪರಿಸರ, ಸಂಸ್ಕೃತಿಗಳ ಸಂರಕ್ಷಣೆಗೆ ಪೂರಕವಾದ ಅಭಿವೃದ್ಧಿ ಕಾರ್ಯಗಳಿಗೆ, ಕೇಂದ್ರ ಸರ್ಕಾರದ ಮೂಲಕ, ಎಲ್ಲ ಸಹಕಾರ ಒದಗಿಸುವುದಾಗಿ, ಯದುವೀರ ಒಡೆಯರ ತಿಳಿಸಿದರು.

<><><>

**ಆತ್ಮನಿರ್ಭರ ಭಾರತ, ಪ್ರಧಾನಮಂತ್ರಿ** ಕಿರು ಆಹಾರ ಉದ್ಯಮಗಳ ನಿಯಬದ್ಧಗೊಳಿಸುವಿಕೆ ಯೋಜನೆಯಡಿ, ವಿಜಯಪುರ ಜಿಲ್ಲೆಯಲ್ಲಿ ಒಟ್ಟು 330 ಕಿರು ಆಹಾರ ಉದ್ದಿಮೆದಾರರು ಆರ್ಥಿಕ ಸಹಾಯಧನ ಪಡೆದು, ಉದ್ದಿಮೆ ಉತ್ಪನ್ನಗಳ ಮೌಲ್ಯವರ್ಧನೆ ಮಾಡಿಕೊಂಡಿದ್ದಾರೆ. ಈ ಬಗ್ಗೆ ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ, ಜಿಲ್ಲಾ ಕೃಷಿ ಇಲಾಖೆ ಜಂಟಿ ನಿರ್ದೇಶಕರಾದ ಶಿವನಗೌಡ ಪಾಟೀಲ

<><><>

**ಧ್ವನಿ: ಶಿವನಗೌಡ ಪಾಟೀಲ 40 ಸೆಕೆಂದುಗಳು**

<><><>

**ಗದಗ ಜಿಲ್ಲೆಯಲ್ಲಿ ಬೀದಿ ಬದಿ** ವ್ಯಾಪಾರಸ್ಥರಿಂದ ಸರ್ಕಾರದ ಮಾರ್ಗಸೂಚಿಗಳ ಅನ್ವಯ ಸಂಗ್ರಹಿಸಲ್ಪಟ್ಟ ಶುಲ್ಕವು ಸರಿಯಾದ ರೀತಿಯಲ್ಲಿ ಬಳಕೆಯಾಗಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ ಪಾಟೀಲ ಹೇಳಿದರು. ಜಿಲ್ಲಾಡಳಿತ ಭವನದಲ್ಲಿ ಬೀದಿ ಬದಿ ವ್ಯಾಪಾರಸ್ಥರ ಸಭೆ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಸಭೆಯಲ್ಲಿ ಬೀದಿ ಬದಿ ವ್ಯಾಪಾರಸ್ಥರ ಸಂಘದ ಪದಾಧಿಕಾರಿಗಳಿಂದ ಸಮಸ್ಯೆ ಹಾಗೂ ಅಹವಾಲು ಆಲಿಸಿದ ಸಚಿವರು, ಶುಲ್ಕ ಸಂಗ್ರಹಕ್ಕೆ ಪ್ರತ್ಯೇಕ ಸಮಿತಿ ರಚನೆ ಕುರಿತಂತೆ ನಗರಸಭೆ ಹಾಗೂ ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳಿಗೆ ತಿಳಿಸುವುದಾಗಿ ಸೂಚಿಸಿದರು.

<><><>

**ಪ್ರಧಾನಮಂತ್ರಿಗಳ 15 ಅಂಶಗಳ ಕಾರ್ಯಕ್ರಮವನ್ನು** ವಿಜಯಪುರ ಜಿಲ್ಲೆಯಲ್ಲಿ ಸಮರ್ಪಕವಾಗಿ ಅನು ಷ್ಠಾನಗೊಳಿಸಿ, ವಿವಿಧ ಇಲಾಖೆಗಳಡಿ ಸರ್ಕಾರಿ ಯೋಜನೆಗಳ ಲಾಭವನ್ನು ಅರ್ಹ ಅಲ್ಪಸಂಖ್ಯಾತ ಫಲಾನುಭವಿಗಳಿಗೆ ಒದಗಿಸಲು ಕ್ರಮ ವಹಿಸುವಂತೆ ಜಿಲ್ಲಾಧಿಕಾರಿ ಡಾ.ಆನಂದ ಕೆ. ಸೂಚಿಸಿದ್ದಾರೆ.

<><><>

**ಬಳ್ಳಾರಿ ಸೈಕ್ಲಿಸ್ಟ್ ಮತ್ತು ರನ್ನರ್ಸ್** ಫೌಂಡೇಶನ್ ವತಿಯಿಂದ, ಇಂದು ಬೆಳಗ್ಗೆ ಸ್ಟೀಲ್ ಸಿಟಿ ರನ್ ಮ್ಯಾರಥಾನ್ ಆಯೋಜಿತವಾಯಿತು. 14 ವಿವಿಧ ರಾಜ್ಯಗಳ ಕ್ರೀಡಾಳುಗಳು ಸೇರಿದಂತೆ, ಒಟ್ಟು ನಾಲ್ಕು ಸಾವಿರ ಜನರು ಪಾಲ್ಗೊಂಡಿದ್ದರು.

<><><>

**ಭಾರತವು ಆರ್ಥಿಕವಾಗಿ ಸುದೃಢವಾಗಿದ್ದು,** ಮುಂದಿನ ದಿನಗಳಲ್ಲಿ ಜಗತ್ತಿನ ಬಲಿಷ್ಠ ಆರ್ಥಿಕ ಶಕ್ತಿಯಾಗಿ ಹೊರಹೊಮ್ಮಲಿದೆ ಎಂದು ಜೆ.ಎಸ್.ಡಬ್ಲ್ಯೂ ಸಿಮೆಂಟ್ ವ್ಯವಸ್ಥಾಪಕ ನಿರ್ದೇಶಕ ಪಾರ್ಥ ಜಿಂದಾಲ್ ಹೇಳಿದರು. ಹುಬ್ಬಳ್ಳಿಯಲ್ಲಿ ಜರುಗಿದ ಕರ್ನಾಟಕ ವಾಣಿಜ್ಯೋದ್ಯಮ ಸಂಸ್ಥೆಯ 97 ನೇ ಸಂಸ್ಥಾಪನಾ ದಿನಾಚರಣೆ ಹಾಗೂ ವಾಣಿಜ್ಯ ರತ್ನ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಉತ್ಪಾದನಾ ವಲಯದಲ್ಲಿ ಪ್ರಗತಿ ಸಾಧಿಸಲು ಭಾರತದಲ್ಲಿ ಪೂರಕ ವಾತಾವರಣವಿದೆ ಎಂದರು.

<><><>

**ನೈಋತ್ಯ ರೇಲ್ವೆ, ಹುಬ್ಬಳ್ಳಿ ವಿಭಾಗದ** ಹಿರಿಯ ವಿಭಾಗೀಯ ವಾಣಿಜ್ಯ ವ್ಯವಸ್ಥಾಪಕರಾಗಿ, ಡಾಕ್ಟರ ಕಾರ್ತಿಕ ವಿ. ಹೆಗಡೆಕಟ್ಟೆ ಅಧಿಕಾರ ಸ್ವೀಕರಿಸಿದ್ದಾರೆ. ಇವರು ಭಾರತೀಯ ರೇಲ್ವೆ ಸಂಚಾರ ಸೇವೆ–ಐಆರ್‌ಟಿಎಸ್ ನ, 2011 ನೇ ಸಾಲಿನ ಅಧಿಕಾರಿಯಾಗಿದ್ದಾರೆ.

<><><>

**ಕೃಷ್ಣರಾಜ ಸಾಗರ ಜಲಾಶಯ ಭರ್ತಿಯಾದ** ಹಿನ್ನೆಲೆ, ಮಂಡ್ಯ ಜಿಲ್ಲೆಯ ಎಲ್ಲ ಕೆರೆಗಳಲ್ಲಿ ನೀರು ತುಂಬಿಸುವಂತೆ ಕೃಷಿ ಖಾತೆ ಸಚಿವ ಎನ್.ಚಲುವರಾಯ ಸ್ವಾಮಿ ಇಲಾಖೆ ಅಧಿಕಾರಿಗಳಿಗೆ ತಿಳಿಸಿದ್ದಾರೆ. ಮಂಡ್ಯದಲ್ಲಿ, ರಾಜ್ಯ ಸರ್ಕಾರದ ಅಭಿವೃದ್ಧಿ ಕಾರ್ಯಕ್ರಮಗಳ ಪ್ರಥಮ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆ ನಡೆಸಿ ಅವರು ಮಾತನಾಡಿದರು. ರೈತರಿಗೆ ಬೆಳೆ ವಿಮೆ ಉಪಯುಕ್ತತೆ ಬಗ್ಗೆ ಜಾಗೃತಿ ಮೂಡಿಸುವಂತೆ ಕೃಷಿ ಅಧಿಕಾರಿಗಳಿಗೆ ಸೂಚಿಸಿದರು.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ**

<><><>